**ಕರ್ನಾಟಕ ಸರಕಾರ**

# ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ

ಆನಂದರಾವ್ ವೃತ್ತ, ಬೆಂಗಳೂರು-560009

ಸಂ: ಆಡಳಿತ/01/2017-18 ದಿನಾಂಕ:01.04.2017

ಇವರಿಗೆ,
ಎಲ್ಲಾ ಜಿಲ್ಲಾ ಆರೋಗ್ಯ ಮತ್ತು
ಕುಟುಂಬ ಕಲ್ಯಾಣ ಅಧಿಕಾರಿಗಳು,
ಎಲ್ಲಾ ಜಿಲ್ಲಾ ಶಸ್ತ್ರ ಚಿಕಿತ್ಸಕರು, ಜಿಲ್ಲಾ ಆಸ್ಪತ್ರೆ,

______________________ಜಿಲ್ಲೆ.

**ವಿಷಯ:-** ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳ ಪ್ರಕಾರ ಕಡ್ಡಾಯವಾಗಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಬಗ್ಗೆ.

**ಉಲ್ಲೇಖ:-**
1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ/43/ಸೇವನೆ/2008 ದಿನಾಂಕ: 07-03-2012
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ/154/ಎಸ್‌ಸಿಆರ್/2014 ದಿನಾಂಕ:27-04-2015
3. ಈ ಆಯುಕ್ತಾಲಯದ ಸುತ್ತೋಲೆ ಸಂಖ್ಯೆ: ಜೆ.ಆರ್.ಓ/ಕ.ಅ(1)05 /2014-15 ದಿನಾಂಕ: 13-10-2014.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳ ಪ್ರಕಾರ ಕಡ್ಡಾಯವಾಗಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಬಗ್ಗೆ ಸದರಿ ಅಧಿಸೂಚನೆಯಲ್ಲಿ ನಿಯಮಗಳು ಇದ್ದು, ದಿನಾಂಕ:07.03.2012 ರಿಂದ ಜಾರಿಗೆ ಬಂದಿರುತ್ತದೆ. ಉಲ್ಲೇಖ (3) ರ ಸುತ್ತೋಲೆಯಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ತೇರ್ಗಡೆ ಹೊಂದಲು ಸೂಚಿಸಲಾಗಿತ್ತು. ಆದಾಗ್ಯೂ ಸಾಕಷ್ಟು ಅಧಿಕಾರಿ/ನೌಕರರು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ತೇರ್ಗಡೆ ಹೊಂದಿಲ್ಲದೆ ಆಡಳಿತಾತ್ಮಕವಾಗಿ ಕಂಪ್ಯೂಟರ್ ಬಳಸದೆ ದೈನಂದಿನ ಕಾರ್ಯಗಳಲ್ಲಿ ತೊಂದರೆ ಆಗುತ್ತಿರುತ್ತದೆ.

ಈ ನಿಯಮಗಳು ಪ್ರಾರಂಭವಾದ ದಿನಾಂಕದಿಂದ 05 ವರ್ಷಗಳ ಅವಧಿಯೊಳಗೆ ಪರೀಕ್ಷೆಯಲ್ಲಿ ಉತ್ತೀರ್ಣರಾಗದೇ ಇದ್ದಲ್ಲಿ, ಮುಂಬಡ್ತಿಗೆ ಅರ್ಹರಾಗತಕ್ಕದಲ್ಲ. ಯಾವುದೇ ಸರ್ಕಾರಿ ನೌಕರನು ಈ

2. . . . . .

ನಿಯಮಗಳ ಪ್ರಾರಂಭವಾದ ದಿನಾಂಕದಿಂದ 06 ವರ್ಷಗಳ ಅವಧಿಯೊಳಗೆ ಪರೀಕ್ಷೆಯಲ್ಲಿ ಉತ್ತೀರ್ಣರಾಗದೇ ಇದ್ದಲ್ಲಿ ವಾರ್ಷಿಕ ವೇತನ ಬಡ್ತಿ ಗಳಿಸಲು ಅರ್ಹನಾಗತಕ್ಕದ್ದಲ್ಲ. ಪರಂತು ಈ ಉಪನಿಯಮದಲ್ಲಿರುವುದಾವುದೂ, ಈ ನಿಯಮಗಳ ಪ್ರಾರಂಭದ ದಿನಾಂಕದಂದು 50 ವರ್ಷಗಳ ವಯಸ್ಸಾಗಿರುವ ಸರ್ಕಾರಿ ನೌಕರರಿಗೆ ಅನ್ವಯಿಸತಕ್ಕದ್ದಲ್ಲ.

ಆದುದರಿಂದ, ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು 2012 ಹಾಗೂ ತಿದ್ದುಪಡಿ ನಿಯಮಗಳು, 2015ರನ್ವಯ ಸದರಿ ನಿಯಮಗಳು ಜಾರಿಗೊಂಡಿರುವ ದಿನಾಂಕ: 07-03-2012 ರಿಂದ ಇದುವರೆವಿಗೂ ಇಲಾಖೆಯಲ್ಲಿ ಬಡ್ತಿ ಹೊಂದಿರುವ ಅಧಿಕಾರಿಗಳು/ಸಿಬ್ಬಂದಿ ವರ್ಗದವರು ದಿನಾಂಕ 07-03-2017ರೊಳಗೆ ಕಡ್ಡಾಯವಾಗಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕಾಗಿರುತ್ತದೆ. ತಪ್ಪಿದಲ್ಲಿ ಮುಂಬಡ್ತಿಗೆ ಅರ್ಹರಾಗುವುದಿಲ್ಲ ಈ ಬಗ್ಗೆ ಕ್ರಮ ಕೈಗೊಳ್ಳಬೇಕಾಗಿರುವುದರಿಂದ ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು

2012 ರಂದು 50ವರ್ಷ ವಯಸ್ಸಾಗಿರುವ ನೌಕರರನ್ನು ಹೊರತುಪಡಿಸಿ ದಿನಾಂಕ: 07-03-2012 ರ ನಂತರದಲ್ಲಿ ಬಡ್ತಿ ಹೊಂದಿರುವ ನೌಕರರು ದಿನಾಂಕ: 07-03-2017 ರೊಳಗಾಗಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ಬಗ್ಗೆ ಸದರಿ ನೌಕರರಿಂದ ಪ್ರಮಾಣ ಪತ್ರ ಪಡೆದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಜಿಲ್ಲಾ ಶಸ್ತ್ರ ಚಿಕಿತ್ಸಕರು ದಿನಾಂಕ 10-04-2017ರ ಒಳಗೆ ಮಾಹಿತಿಯನ್ನು ನೀಡುವುದು. ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯು ಕಡ್ಡಾಯವಾಗಿದ್ದು, ಇನ್ನು ಮುಂದೆ ಕಛೇರಿ ಕಾರ್ಯಗಳಲ್ಲಿ ಕಂಪ್ಯೂಟರ್ ಬಳಕೆಯನ್ನು ಸಂಬಂಧಿಸಿದ ಅಧಿಕಾರಿ/ನೌಕರರೇ ನಿರ್ವಹಿಸಬೇಕಾಗಿರುವುದರಿಂದ ಹಾಗೂ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ತೆಗೆದುಕೊಳ್ಳಲಾದ ಅಧಿಕಾರಿ/ನೌಕರರಿಗೆ ಉಲ್ಲೇಖದ ಅಧಿಸೂಚನೆಯನ್ವಯ ನಿಗಧಿತ ಸಮಯದಲ್ಲಿ ತೇರ್ಗಡೆಹೊಂದಲು ಸೂಕ್ತ ನಿರ್ದೇಶನ ನೀಡಲು ಈ ಮೂಲಕ ಸೂಚಿಸಿದೆ.

1.4.17.
ಆಯುಕ್ತರು,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಸೇವೆಗಳು, ಬೆಂಗಳೂರು.

**ಪ್ರತಿಯನ್ನು,**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಧಾನಸೌದ, ಬೆಂಗಳೂರು.
2. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
3. ಸೀನಿಯರ್ ಪ್ರೋಗ್ರಾಮರ್, ಕಂಪ್ಯೂಟರ್ ವಿಭಾಗ, ಆರೋಗ್ಯ ಮತ್ತು ಕು.ಕ.ಸೇವೆಗಳು, ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸುವುದು.